**ದಿನಾಂಕ 12.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

2ನೇ ಎದುರುದಾರರು ಏಕ ಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಅರ್ಜಿದಾರರು ನನಗೆ ಸುಮಾರು ವರ್ಷಗಳಿಂದ ಪರಿಚಯಸ್ಥರು. ಅವರು ನಮ್ಮ ಪಕ್ಕದ ಮನೆಯವರು. ಅಪಘಾತವನ್ನು ಕಣ್ಣಾರೆ ನೋಡಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**